## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **551 (691)** |
| **ಸದಸ್ಯರ ಹೆಸರು** | : | **ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | : | **11.12.2023** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಮತ್ತು ಮಹಾರಾಷ್ಟ್ರದ ಗಡಿ ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಕಾಡುತಿದ್ದು, ವರ್ಷದಿಂದ ವರ್ಷಕ್ಕೆ ಮಕ್ಕಳ ಪ್ರವೇಶಾತಿಯಲ್ಲಿ ಇಳಿಕೆಯಾಗುತ್ತಿರುವುದರಿಂದ ಶಾಲೆಗಳನ್ನು ಮುಚ್ಚುವ ಹಂತಕ್ಕೆ ತಲುಪಿದ್ದು, ಸದರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳನ್ನು ಅನಿವಾರ್ಯ ಕಾರಣಗಳಿಗಾಗಿ ಮಕ್ಕಳ ಭವಿಷ್ಯದ ದೃಷ್ಠಿಯಿಂದ ತರಾತುರಿಯಲ್ಲಿ ಆಂಗ್ಲ ಮಾಧ್ಯಮ ಶಾಲೆಗಳಿಗೆ ಸೇರಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳಗಾವಿ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ, ವಿಜಯಪುರ ಜಿಲ್ಲೆಗಳಲ್ಲಿ ಶಿಕ್ಷಕರ ಕೊರತೆ ಇದ್ದು, ಸದರಿ ಹುದ್ದೆಗಳಿಗೆ ಎದುರಾಗಿ ಅತಿಥಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಂಡಿರುವುದರಿಂದ ಕನ್ನಡ ಮಾಧ್ಯಮದ ಯಾವುದೇ ಶಾಲೆಗಳನ್ನು ಮುಚ್ಚಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಗಡಿನಾಡು ಕನ್ನಡ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ನೇಮಕಾತಿಗೆ ಸರ್ಕಾರವು ಕ್ರಮವಹಿಸುವುದೇ ಮತ್ತು ಕನ್ನಡ ಭಾಷೆಯ ಉಳಿವಿಗೆ ಮುತುವರ್ಜಿ ವಹಿಸುವುದೇ ಮಾಹಿತಿ ನೀಡುವುದು ? | ಗಡಿ ಭಾಗದ ಕನ್ನಡ ಮಾಧ್ಯಮ ಶಾಲೆಗಳಲ್ಲಿ 2022-23ನೇ ಸಾಲಿನ ಜಿಪಿಎಸ್‌ಟಿಆರ್ ಶಿಕ್ಷಕರ ನೇಮಕಾತಿಯಲ್ಲಿ ಈ ಕೆಳಗಿನಂತೆ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗಿದೆ. |

| ಕ್ರ. ಸಂ. | ಜಿಲ್ಲೆಯ ಹೆಸರು | ಶಿಕ್ಷಕರ ಸಂಖ್ಯೆ |
|---|---|---|
| 1. | ಬೆಳಗಾವಿ | 180 |
| 2. | ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ | 452 |
| 3. | ವಿಜಯಪುರ | 87 |
| | **ಒಟ್ಟು** | **719** |

**ಸಂಖ್ಯೆ: ಇಪಿ 53 ಪಿಎಂಎ 2023.**

**(ಎಸ್. ಮಧು ಬಂಗಾರಪ್ಪ)**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**